ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 21/01/2020

# ಮಂಗಳೂರಿನಲ್ಲಿ 'ಬಾಂಬ್' ನಗರದಾದ್ಯಂತ ಕಟ್ಟೆಚ್ಚರ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಮಂಗಳೂರು ವಿಮಾನ ನಿಲ್ದಾಣದಲ್ಲಿ ಬಾಂಬ್ ಪತ್ತೆಯಾದ ಹಿನ್ನೆಲೆಯಲ್ಲಿ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ, ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣ ಸೇರಿದಂತೆ ನಗರದಾದ್ಯಂತ ಕಟ್ಟೆಚ್ಚರ ವಹಿಸಲಾಗಿದೆ.

ಕೆಂಪೇಗೌಡ ವಿಮಾನ ನಿಲ್ದಾಣ ಈಗಾಗಲೇ ಹೆಚ್ಚಿನ ಭದ್ರತಾ ವ್ಯಾಪ್ತಿಯಲ್ಲಿದೆ. ಇಲ್ಲಿ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯನ್ನು ನಿಯೋಜಿಸಲಾಗಿದೆ. ನಿಲ್ದಾಣದ ಪ್ರವೇಶ ಸ್ಥಳದಲ್ಲೇ ವಾಹನಗಳನ್ನು ತಪಾಸಣೆ ನಡೆಸಲಾಗುತ್ತಿದೆ. ಟರ್ಮಿನಲ್‌ಗೆ



ಭಾಸ್ಕರ್ ರಾವ್

ಪ್ರವೇಶ ಸೇರಿದಂತೆ ಎಲ್ಲ ಕಡೆ ಭದ್ರತೆ ಇದೆ. ವಿಮಾನ ನಿಲ್ದಾಣದ ಆವರಣದಲ್ಲಿ ಸ್ಥಳೀಯ ಪೊಲೀಸರು ವಿಶೇಷ ನಿಗಾ ವಹಿಸುತ್ತಿದ್ದಾರೆ ಎಂದು ಪೊಲೀಸ್ ಕಮಿಷನರ್ ಭಾಸ್ಕರ್ ರಾವ್ ತಿಳಿಸಿದರು.

'ಹೆಚ್ಚಿನ ಭದ್ರತೆ ಹಾಗೂ ತೀವ್ರ ನಿಗಾ ವಹಿಸುವಂತೆ ರಾಜ್ಯದ ಎಲ್ಲ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ' ಎಂದು ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಡಾ. ಅಮರ್ ಕುಮಾರ್ ಪಾಂಡೆ ಹೇಳಿದರು.